<u>ಸಿಸಿ ನಂ. 132/2023</u> <u>ಪಿಡಬ್ಲೂ :1</u>

<u>ದಿನಾಂಕಃ 28-11-2023 ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣೀಕರಿಸಲಾಯಿತು.</u>

ಫಿರ್ಯಾದುದಾರ ಸಂಸ್ಥೆಯ ವ್ಯವಸ್ಥಾಪಕರ ಪ್ರಮಾಣೀಕೃತ ಹೇಳಿಕೆಯನ್ನು ಮುಖ್ಯ ವಿಚಾರಣೆ ಎಂದು ಹಾಗೂ ಸದರಿ ವ್ಯವಸ್ಥಾಪಕರನ್ನು ಪಿಡಬ್ಲ್ಯೂ-1 ಎಂದು ಪರಗಣಿಸಲಾಗಿದೆ .

**<u>ಮುಂದುವರೆದ ಮುಖ್ಯ ವಿಚಾರಣೆಃ ಪಿರ್ಯಾದುದಾರರ ಪರವಾಗಿಃ ಶ್ರೀ ಪಿ ಜಿ ಹೆಚ್ ವಕೀಲರಿಂದಃ</u>**

2. ಫಿರ್ಯಾದುದಾರ ಸಂಸ್ಥೆಯವರು ನನಗೆ ನೀಡಿದ ಅಧಿಕಾರ ಪತ್ರವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು. ಆರೋಪಿಯು ನೀಡಿದ ಚೆಕ್ ಹಾಜರು ಪಡಿಸಿದ್ದು ಅದನ್ನು ನಿಪಿ -2 ಎಂದು ಗುರುತಿಸಲಾಯಿತು . ನಿಪಿ-2 ರಲ್ಲಿರುವ ಸಹಿ ಆರೋಪಿಯ ಸಹಿಯಾಗಿರುತ್ತದೆ . ಸದರಿ ಸಹಿಯನ್ನು ನಿಪಿ -2 ಎ ಎಂದು ಗುರುತಿಸಲಾಯಿತು. ಬ್ಯಾಂಕನವರು ಕೊಟ್ಟಿರುವ ಮೆಮೊವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ -3 ಎಂದು ಗುರುತಿಸಲಾಯಿತು. ನಾವು ನಮ್ಮ ವಕೀಲರ ಮುಖಾಂತರ ಆರೋಪಿಗೆ ನೀಡಿದ ನೋಟಿಸಿನ ಕಚೇರಿ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ -4 ಎಂದು, ಎರಡು ಅಂಚೆ ರಸೀದಿಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ನಿಪಿ-5 ಮತ್ತು ನಿಪಿ -6 ಎಂದು ಗುರುತಿಸಲಾಯಿತು. ಎರಡು ಅಂಚೆ ಸ್ವೀಕೃತಿ ಪತ್ರಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ನಿಪಿ -7 ಮತ್ತು ನಿಪಿ -8 ಎಂದು ಗುರುತಿಸಲಾಯಿತು. ಸದರಿ ನೋಟಿಸಿಗೆ ಆರೋಪಿಯು ತನ್ನ ವಕೀಲರ ಮುಖಾಂತರ ಕಳುಹಿಸಿದ ಉತ್ತರವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-9 ಎಂದು ಗುರುತಿಸಲಾಯಿತು.

( ಮುಂದುವರೆದ ಮುಖ್ಯ ವಿಚಾರಣೆ ಕೋರಿಕೆಯ ಮೇರೆಗೆ ಮುಂದೂಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಧಾನ ಪ್ರ.ದ.ನ್ಯಾದಂ., ಕುಮಟಾ.